ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಕೃಷ್ಣಾ ಮೇಲ್ದಂಡೆ ಯೋಜನೆಯ ಕುರಿತು

ಶ್ರೀ ಸುನೀಲ್‌ಗೌಡ ಬಸನಗೌಡ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

563 (635) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಉತ್ತರ ಕರ್ನಾಟಕದ ಮಹತ್ವದ ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೆಯ ಹಂತದ ಯೋಜನೆಯು ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ತ್ವರಿತವಾಗಿ ಈ ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು; ಮತ್ತು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಸದರಿ ಯೋಜನೆಗೆ ಬಜೆಟ್‌ನಲ್ಲಿ ಮೀಸಲಿಟ್ಟ ಅನುದಾನವೆಷ್ಟು;

(ಈ) ಮಹದಾಯಿ ಯೋಜನೆಯಂತೆ, ಕೃಷ್ಣಾ ಮೇಲ್ದಂಡೆ ಮೂರನೇ ಹಂತದ ಯೋಜನೆಯ ಗೆಜೆಟ್ ನೋಟಿಫಿಕೇಷನ್ ಪ್ರಕಟಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಉ) ಇಲ್ಲವಾದಲ್ಲಿ, ಮಹದಾಯಿ ಯೋಜನೆಗೆ ಗೆಜೆಟ್ ನೋಟಿಫಿಕೇಷನ್ ಪ್ರಕಟಸಿದಂತೆ ಇದನ್ನು ಪ್ರಕಟಿಸಲು ಕ್ರಮ ಕೈಗೊಳ್ಳಲಾಗುವುದೇ?